# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 20-ಗಂಗಾನಗರ, ಬೆಂಗಳೂರು.**

**ಸಂಖ್ಯೆ: ಸ.ಅ/ವಾ-20/ಪಿ.ಆರ್/08/2020-21** **ದಿನಾಂಕ:16-01-2021.**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/20-21 ದಿನಾಂಕ:05-12-2020. ರವರ ಆದೇಶದಂತೆ ದಿನಾಂಕ: 16-01-2021 ರಂದು 9.30 ಗಂಟೆಗೆ ಬೆಳಗ್ಗೆ ವಾರ್ಡ್ ನಂ:20 ಗಂಗಾನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### "ಸಭೆಗೆ ಹಾಜರಾಗಿದ್ದವರ ವಿವರಗಳು"

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಶ್ರೀ ಬಿ.ಎಸ್ ಪ್ರಹಲಾದ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ರಾಮ್‌ರಾವ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.20 |
| 03 | ಕೆ.ಎನ್ ಮಂಜುನಾಥ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) |
| 04 | ಶ್ರೀನಿವಾಸ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾಡ್ ನಂ: 20, |
| 05 | ಸುವರ್ಣ ದೇವಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 06 | ಭವ್ಯ ಅನು ಎ.ವಿ | ವಕೀಲರು |
| 07 | ರವಿ ಆರ್ | ಆರ್.ಬಿ ಐ ಕಾಲೋನಿ |
| 08 | ಶಲೀನಿ | ಆರ.ಡಬ್ಲ್ಯೂ.ಎ |
| 09 | ಹೆಚ್.ಕೆ ರಮೇಶ್ | ಸಾರ್ವಜನಿಕರು |
| 10 | ಶ್ರೀನಿವಾಸ್ | ಸಾರ್ವಜನಿಕರು |
| 11 | ವಿಜಯ ಗೌಡ | ಸಾರ್ವಜನಿಕರು |
| 12 | ಶಾಲಿನಿ | ಸಾರ್ವಜನಿಕರು |
| 13 | ಮುನಿಯಪ್ಪ | ಸಾರ್ವಜನಿಕರು |
| 14 | ಆನಂದ ಪಿ.ಸಿ | ಜೆ.ಇ ವಿದ್ಯುತ್ ವಿಭಾಗ ಬಿಬಿಎಂಪಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯಾದ ಶ್ರೀ. ಬಿ.ಎಸ್ ಪ್ರಹಲಾದ್ ಮತ್ತು ಕಾರ್ಯದರ್ಶಿಗಳಾದ ಶ್ರೀ ರಾಮ್‌ರಾವ್ ರವರು ಸಭೆಗೆ ಆಗಮಿಸಿದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ನಂ: 20 ರವರು ಸ್ವಯಂ ಪರಿಚಯ ಮಾಡಿಕೊಂಡು ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದರು.

- ವಾರ್ಡ್ ವ್ಯಾಪ್ತಿಯ ಸರ್ಕಾರಿ ಶಾಲೆಯ ಸಮಯದಲ್ಲಿ ಸುತ್ತಮುತ್ತಲಿನ ಸಾರ್ವಜನಿಕರುಗಳು ಶಬ್ದ ಮಾಡುವುದು ಹಾಗೂ ಸ್ಪೀಕರಿಂದ ಹಾಡು ಹಾಕುವುದನ್ನು ನಿಲ್ಲಿಸಲು ಪೋಲಿಸ್ ಅಧಿಕಾರಿಗಳಿಗೆ ಪತ್ರ ನೀಡಲು ವಾರ್ಡ್ ಕಮಿಟಿ ಕಾರ್ಯದರ್ಶಿಗಳಿಗೆ ತಿಳಿಸಲಾಯಿತು.
- ವಾರ್ಡ್ ಪ್ರದೇಶಗಳಲ್ಲಿನ ಪಾರ್ಕ್‌ಗೆ ಒಂದು ಹೊಸ ಗೇಟ್ ಅಳವಡಿಸಲು ಕಾಮಗಾರಿ ಇಲಾಖೆಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಪೇಪರ್ ಪ್ಯಾಕ್ಟರಿಯನ್ನು ಈ ಕೂಡಲೇ ಮುಚ್ಚಲು ಸಂಪಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

- ಖಾಲಿ ಸ್ಥಳಗಲ್ಲಿ ತ್ಯಾಜ್ಯವನ್ನು ಹಾಕುವುದರಿಂದ ಸುತ್ತಮುತ್ತಲಿನ ಸಾರ್ವಜನಿಕರುಗಳಿಗೆ ತುಂಬ ತೊಂದರೆಯಾಗುತ್ತಿರುವುದರಿಂದ ಅಂತಹ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸುವಂತೆ ಸೂಚಿಸಲಾಗಿದೆ.
- ವಾರ್ಡ್ ವ್ಯಾಪತಿಯಲ್ಲಿ ಕಸ ವಿಲೇವಾರಿ ಮಾಡದಿರುವ ಸಾರ್ವಜನಿಕರುಗಳಿಗೆ ದಂಡ ವಿದಿಸುವಂತೆ ಸೂಚಿಸಲಾಯಿತು.
- ಬೆಸ್ಕಾಂ ರವರು ವಿದ್ಯುತ್ ಕಂಬ್ಬಿಗೆ ತಗಲುವ ಮರದ ಕೊಂಬೆಗಳನ್ನು ಕಡಿತಗೊಳಿಸಿ ತಾವೆ ಸ್ವಚ್ಛಗೊಳಿಸುವಂತೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ಪಾರ್ಕ್ ನಿರ್ವಹಣೆ ಮಾಡದಿರುವ ಬಗ್ಗೆ ಚರ್ಚಿಸಲಾಗಿ ನಿರ್ವಹಣೆಯ ಬಗ್ಗೆ ಅಗತ್ಯ ಕ್ರಮ ವಹಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸಿ ಸದರಿ ಸ್ಥಳಗಳಲ್ಲಿ ನೋ ಪಾರ್ಕಿಗ್ ನಾಮಪಲಕವನ್ನು ಅಳವಡಿಸಲು ಪೋಲಿಸ್ ಸಿಂಬ್ಬಂದಿಗೆ ಸೂಚಿಸಲಾಯಿತು.
- ಸಾರ್ವಜನಿಕರುಗಳಿಗೆ ಮಾಸ್ಕ್ ಧರಿಸಲು ಅರಿವು ಮೂಡಿಸುವ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ಶ್ರೆರೆಸಿಡೆನ್ಸಿ ಆಟದ ಮೈದಾನವನ್ನು ಭದ್ರತೆ ಮಾಡುವಂತೆ ಸಂಬಂದಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
- ಸಾರ್ವಜನಿಕರುಗಳಿಗೆ ಮಾಸ್ಕ್ ದರಿಸಲು ಅರಿವು ಮೂಡಿಸಲು ಕಾರ್ಯಕ್ರಮ ಮಾಡುವಂತೆ ಆರೋಗ್ಯ ವೈದ್ಯಾದಿಕಾರಿಗಳಿಗೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಕೂಲಂಕುಶವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು | ಅಧ್ಯಕ್ಷರು 6/9/2021 |
| ಹಾಗೂ ಸಹಾಯಕ ಅಭಿಯಂತರರು | ಹಾಗೂ ನೋಡಲ್ ಅಧಿಕಾರಿಗಳು |
| ವಾರ್ಡ್ ನಂ: 20-ಗಂಗಾನಗರ | ವಾರ್ಡ್ ನಂ: 20-ಗಂಗಾನಗರ |

<u>ಪ್ರತಿಯನ್ನು:-</u>

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು(ಪೂರ್ವ)ಬಿಬಿಎಂಪಿರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
6. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.